ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಕರ್ನಾಟಕ ಭೂ ಕಬಳಿಕೆ ನಿಷೇಧ ಕಾಯಿದೆ ಕುರಿತು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

652 (843) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಭೂಗಳ್ಳರ ವಿರುದ್ಧ ಕಾನೂನು ಕ್ರಮ ಜರುಗಿಸಲು ಕರ್ನಾಟಕ ಭೂ ಕಬಳಿಕೆ ನಿಷೇಧ ಕಾಯಿದೆಯನ್ನು ಯಾವಾಗ ಜಾರಿಗೊಳಿಸಲಾಯಿತು;

(ಆ) ಬೆಂಗಳೂರು ನಗರ ಜಿಲ್ಲೆಯಲ್ಲಿ ಈ ಕಾಯಿದೆ ಅನ್ವಯ ಪ್ರಕರಣಗಳ ತ್ವರಿತ ವಿಚಾರಣೆಗಾಗಿ ವಿಶೇಷ ನ್ಯಾಯಾಲಯವನ್ನು ಯಾವಾಗ ಸ್ಥಾಪನೆ ಮಾಡಲಾಯಿತು ಮತ್ತು ಎಷ್ಟು ಪೀಠಗಳಲ್ಲಿ ಈ ನ್ಯಾಯಾಲಯಗಳು ಕಾರ್ಯನಿರ್ವಹಿಸುತ್ತಿವೆ;

(ಇ) ನ್ಯಾಯಾಲಯದ ವ್ಯಾಪ್ತಿ ಬೆಂಗಳೂರು ನಗರಕ್ಕೆ ಮಾತ್ರ ಸೀಮಿತವಾಗಿದ್ದು, ಸದರಿ ನ್ಯಾಯಾಲಯವನ್ನು ರಾಜ್ಯವ್ಯಾಪ್ತಿಗೆ ವಿಸ್ತರಿಸಿ ವಿಚಾರಣೆಗೆ ನಿಗಧಿಪಡಿಸಿರುವುದರಿಂದ ಸಮಸ್ಯೆ ಯಾಗುತ್ತಿರುವುದು ಸರ್ಕಾರ ಗಮನಕ್ಕೆ ಬಂದಿಲ್ಲವೆ; ಬಂದಿದ್ದಲ್ಲಿ, ಹೆಚ್ಚುವರಿ ಪೀಠಗಳನ್ನು ತೆರೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಬಲಾಢ್ಯ ಭೂಗಳ್ಳರ ತಂಟೆಗೆ ಹೋಗದ ಕಂದಾಯ ಅಧಿಕಾರಿಗಳು ಅಲ್ಪ ಸ್ವಲ್ಪ ಸರ್ಕಾರಿ ಭೂಮಿ ಸಾಗುವಳಿ ಮಾಡಿಕೊಂಡಿದ್ದ ಬಡ ರೈತರ ಮೇಲೆ ಕಾನೂನು ಅಸ್ತ್ರ ಪ್ರಯೋಗ ಮಾಡಿ, ಸಣ್ಣ ಮತ್ತು ಮಧ್ಯಮ ಬಡ ರೈತರಿಗೆ ಭೂಗಳ್ಳರ ಹಣೆಪಟ್ಟಿ ಕಟ್ಟಿ ಜೈಲು ಶಿಕ್ಷೆಗೂ ಗುರಿಯಾಗುವ ಸನ್ನಿವೇಶಗಳು ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ;

(ಉ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)